# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ | KANNADA POST | ಇದು ಸುದ್ದಿ ವಿಲಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 99 | Pages. 2 | Date: 19-03-2026, THURSDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 99 – ಪುಟಗಳು : 2 | 19-03-2026 | ಗುರುವಾರ | Ph: 8762954248 | ದರ : ₹1


## ಹಡೇನಹಳ್ಳಿ ಲೋಕೇಶ್‌ಗೆ ಬೆಂಬಲ: ಡಾ. ಎಚ್.ಎಲ್. ಮಲ್ಲೇಶಗೌಡ

### ಕಸಾಪ ಜಿಲ್ಲಾ ಅಧ್ಯಕ್ಷ ಸ್ಥಾನಕ್ಕೆ ಕ್ರಿಯಾಶೀಲ ಅಭ್ಯರ್ಥಿಗೆ ಬೆಂಬಲ ಘೋಷಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಕನ್ನಡ ಸಾಹಿತ್ಯ ಪರಿಷತ್ತು ನಾಡಿನ ಮಹನೀಯರ ಮಹತ್ತರ ಆಶಯಗಳಿಂದ ರೂಪುಗೊಂಡ ದೀರ್ಘ ಇತಿಹಾಸ ಹೊಂದಿದ ಸಂಸ್ಥೆಯಾಗಿದ್ದು, ಆ ಆಶಯಗಳಿಗೆ ಚ್ಯುತಿ ಬರದಂತೆ ಪರಿಷತ್ತನ್ನು ಮುನ್ನಡೆಸುವುದು ಮೊದಲ ಆದ್ಯತೆಯಾಗಬೇಕು ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ಎಚ್.ಎಲ್. ಮಲ್ಲೇಶಗೌಡ ಹೇಳಿದರು.

ನಗರದ ಖಾಸಗಿ ಹೋಟೆಲ್‌ನಲ್ಲಿ ಮಂಗಳವಾರ ಸಂಜೆ, ಮುಂಬರುವ ಕಸಾಪ ಚುನಾವಣೆಯ ಜಿಲ್ಲಾ ಅಧ್ಯಕ್ಷ ಸ್ಥಾನದ ಆಕಾಂಕ್ಷಿಯಾಗಿ ಎಚ್.ಎಚ್. ಲೋಕೇಶ್ (ಹಡೇನಹಳ್ಳಿ) ಆಯೋಜಿಸಿದ್ದ ಸಭೆಯಲ್ಲಿ ಅವರು ಮಾತನಾಡಿದರು.

ಪರಿಷತ್ತಿನ ಘನತೆಯನ್ನು ಎತ್ತಿಹಿಡಿಯುವ, ಆರ್ಥಿಕ ಪರಿಶುದ್ಧತೆಯನ್ನು ಕಾಪಾಡುವ ವ್ಯಕ್ತಿತ್ವ ಹೊಂದಿರುವವರು ಆ ಸ್ಥಾನಕ್ಕೆ ಬರಬೇಕು ಎಂಬುದು ನನ್ನ ಆಶಯ. ಈ ಹಿನ್ನೆಲೆಯಲ್ಲಿ ಎಲ್ಲರೊಂದಿಗೆ ಚರ್ಚಿಸಿ, ಕ್ರಿಯಾಶೀಲ ವ್ಯಕ್ತಿತ್ವದ ಲೋಕೇಶ್ ಅವರನ್ನು ಮುಂಬರುವ ಚುನಾವಣೆಯಲ್ಲಿ ಬೆಂಬಲಿಸಲು ನಿರ್ಧರಿಸಿದ್ದೇನೆ ಎಂದು ಹೇಳಿದರು.

ಜಿಲ್ಲಾ ಪತ್ರಕರ್ತರ ಸಂಘದ ಮಾಜಿ ಅಧ್ಯಕ್ಷ ಹಾಗೂ ಡಾ. ರಾಜ್‌ಕುಮಾರ್ ಸಂಘದ ಜಿಲ್ಲಾಧ್ಯಕ್ಷ ಬಾಳ್ಳುಗೋಪಾಲ್ ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ತಿಗೆ ಗೌರವ ತಂದುಕೊಡುವವರು ಅಧ್ಯಕ್ಷ ಸ್ಥಾನಕ್ಕೇರಬೇಕು. ಬೇರೆ ಉದ್ದೇಶಗಳಿಂದ ಬರುವವರನ್ನು ಮತದಾರರು ದೂರವಿಡಬೇಕು ಎಂದರು. ಸಂಘಟನೆಯಲ್ಲಿ ಕ್ರಿಯಾತ್ಮಕವಾಗಿ ಕೆಲಸ ಮಾಡುವವರನ್ನು ಎಲ್ಲರೂ ಗೌರವಿಸಬೇಕು ಎಂದು ಹೇಳಿದರು.

ಕಸಾಪ ಮಾಜಿ ಅಧ್ಯಕ್ಷ ಡಾ. ಎಚ್.ಎಲ್. ಜನಾರ್ಧನ್ ಮಾತನಾಡಿ, ಹಡೇನಹಳ್ಳಿ ಲೋಕೇಶ್ ಅವರು ಎರಡು ಬಾರಿ ತಾಲೂಕು ಅಧ್ಯಕ್ಷರಾಗಿ ಕ್ರಿಯಾಶೀಲವಾಗಿ ಕೆಲಸ ಮಾಡಿದ್ದಾರೆ. 81ನೇ ಅಖಿಲ ಭಾರತ ಸಾಹಿತ್ಯ ಸಮ್ಮೇಳನದ ಸಂದರ್ಭದಲ್ಲಿ ಕಡಿಮೆ ಅವಧಿಯಲ್ಲೇ ತಾಲೂಕಿನಾದ್ಯಂತ ಯುವಜನರನ್ನು ಸಂಘಟಿಸಿ, ಶ್ರವಣಬೆಳಗೊಳದಲ್ಲಿ ನಡೆದ ಸಮ್ಮೇಳನವನ್ನು ಯಶಸ್ವಿಗೊಳಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದು ಹೇಳಿದರು.



ಸಾಹಿತಿ ಹುಲ್ಲೇನಹಳ್ಳಿ ರಾಜೇಶ್ವರಿ ಮಾತನಾಡಿ, ಕನ್ನಡದ ಕೆಲಸವನ್ನು ನಿಸ್ವಾರ್ಥವಾಗಿ ಮಾಡುವವರಿಗೆ ಎಲ್ಲರೂ ಬೆಂಬಲಿಸಬೇಕು. ಲೋಕೇಶ್ ಅವರ ವ್ಯಕ್ತಿತ್ವವೇ ಅವರಿಗೆ ಬೆಂಬಲ ಸಿಗುವ ಪ್ರಮುಖ ಕಾರಣವಾಗಬಹುದು. ಈ ಬಾರಿ ಹಡೇನಹಳ್ಳಿ ಲೋಕೇಶ್ ಅವರಿಗೆ ಬೆಂಬಲ ನೀಡೋಣ ಎಂದು ಕರೆ ನೀಡಿದರು.

ಡಾ. ಐಚನಹಳ್ಳಿ ಕೃಷ್ಣಪ್ಪ ಮಾತನಾಡಿ, ಈ ಹಿಂದೆಯೂ ಲೋಕೇಶ್ ಅವರೊಂದಿಗೆ ಕೆಲಸ ಮಾಡಿದ್ದೇನೆ. ಅವರು ಸ್ನೇಹಜೀವಿ ಹಾಗೂ ವಿಶ್ವಾಸಾರ್ಹ ವ್ಯಕ್ತಿತ್ವ ಹೊಂದಿದ್ದು, ಸಂಘಟನೆಯನ್ನು ಉತ್ತಮವಾಗಿ ಮುನ್ನಡೆಸುವ ಸಾಮರ್ಥ್ಯ ಹೊಂದಿದ್ದಾರೆ ಎಂದು ಅಭಿಪ್ರಾಯಪಟ್ಟರು.

ಜಿಲ್ಲಾ ಅಧ್ಯಕ್ಷ ಸ್ಥಾನಕ್ಕೆ ಆಕಾಂಕ್ಷಿಯಾಗಿರುವ ಲೋಕೇಶ್ ಹಡೇನಹಳ್ಳಿ ಮಾತನಾಡಿ, ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ನೌಕರರ ಸಂಘದಲ್ಲಿ ಹಿರಿಯರ ಸಲಹೆಯೊಂದಿಗೆ ಉತ್ತಮ ಕೆಲಸಗಳನ್ನು ಮಾಡಿಕೊಂಡು ಬಂದಿದ್ದೇನೆ. ಮತದಾರರು ನನ್ನನ್ನು ಆಯ್ಕೆ ಮಾಡಿದರೆ ಪರಿಷತ್ತಿನ ಘನತೆಗೆ ಚ್ಯುತಿ ಬರದಂತೆ ಕಾರ್ಯನಿರ್ವಹಿಸುತ್ತೇನೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಸಭೆಯಲ್ಲಿ ನೌಕರರ ಸಂಘದ ಮಾಜಿ ನಿರ್ದೇಶಕ ಬಸವರಾಜು, ಡೈಟ್ ಉಪನ್ಯಾಸಕ ಸಿ.ಕೆ. ಹರೀಶ್, ರೈತ ಸಂಘದ ಯೋಗೇಶ್, ಜನಪದ ಕಲಾವಿದ ದೊಡ್ಡಳ್ಳಿ ರಮೇಶ್, ನೌಕರರ ಸಂಘದ ನಿರ್ದೇಶಕರಾದ ಪಾರ್ಥೇಶ್, ಆಶಾ, ವೆಂಕಟೇಶ್, ರವೀಂದ್ರ, ವಿವಿಧ ಕನ್ನಡಪರ ಸಂಘಟನೆಗಳ ಮುಖಂಡರಾದ ಭರತಗೌಡ, ಕಸಾಪ ಗೌರವ ಕಾರ್ಯದರ್ಶಿ ಬಿ.ಆರ್. ಬೊಮ್ಮೇಗೌಡ, ಶಿಕ್ಷಕರ ಸಂಘದ ಪದಾಧಿಕಾರಿಗಳು ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಕೇಂದ್ರದಿಂದ ಕನ್ನಡಿಗರಿಗೆ ನಿರಂತರ ಅನ್ಯಾಯ: ಆಕ್ರೋಶ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರೈಲ್ವೆ ಇಲಾಖೆ ಪರೀಕ್ಷೆಯಲ್ಲಿ ಕನ್ನಡಿಗರಿಗೆ ಕೇಂದ್ರ ಸರ್ಕಾರ ನಿರಂತರವಾಗಿ ಅನ್ಯಾಯ ಮಾಡುತ್ತಿದೆ ಎಂದು ಕದಂಬ ಸೈನ್ಯ ಪದಾಧಿಕಾರಿಗಳು ಆರೋಪಿಸಿದರು.

ನೈರುತ್ಯ ರೈಲ್ವೆಯ ಗೂಡ್ಸ್ ಟ್ರೈನ್ ಮ್ಯಾನೇಜರ್ ಹುದ್ದೆ ಪರೀಕ್ಷೆಯಲ್ಲಿ ಕನ್ನಡ ಕಡೆಗಣಿಸಿದ್ದರ ಪರಿಣಾಮ ಮಂಗಳವಾರದ ಪರೀಕ್ಷೆ ರದ್ದುಪಡಿಸುವಂತಾಗಿದೆ. ಕೇವಲ ಇಂಗ್ಲಿಷ್ ಹಾಗೂ ಹಿಂದಿ ಭಾಷೆಗೆ ಮನ್ನಣೆ ನೀಡುವುದು ಸರಿಯಾದ ಕ್ರಮವಲ್ಲವೆಂದು ಆಕ್ರೋಶ ವ್ಯಕ್ತಪಡಿಸಿದರು.

194 ಹುದ್ದೆ ಮತ್ತು ಎಲ್‌ಡಿಸಿಇ 101 ಮುಂಬಡ್ತಿ ಹುದ್ದೆಗಳಿಗೆ 2025ರಲ್ಲೇ ಅಧಿಸೂಚನೆ ಹೊರಡಿಸಲಾಗಿತ್ತು. ಆಗ ಕನ್ನಡದಲ್ಲೂ ಪರೀಕ್ಷೆ ಬರೆಯುವ ಅವಕಾಶವಿದೆಯೆಂದು ತಿಳಿಸಲಾಗಿತ್ತು. ಆದರೆ, ಪರೀಕ್ಷೆಗೆ ನಾಲ್ಕೈದು ದಿನಗಳಿರುವಾಗ ಕೇವಲ ಹಿಂದಿ ಮತ್ತು ಇಂಗ್ಲಿಷ್‌ನಲ್ಲಿ ಮಾತ್ರ ಪರೀಕ್ಷೆ ಬರೆಯಲು ಅವಕಾಶ ಎಂದು ಇಲಾಖೆ ತಿಳಿಸಿದ್ದರಿಂದ ಕನ್ನಡಿಗರಿಗೆ ಅನ್ಯಾಯವಾಗಿದೆಯೆಂದರು.

ಸಚಿವ ವಿ.ಸೋಮಣ್ಣ ಅವರು ಪ್ರತಿ ಸಂದರ್ಭದಲ್ಲೂ



ಕನ್ನಡಿಗರಿಗೆ ಅನ್ಯಾಯವಾಗಲು ಬಿಡುವುದಿಲ್ಲವೆಂದು ಹೇಳಿಕೊಂಡು ಬಂದಿದ್ದರು. ಅವರ ಭರವಸೆ ಹುಸಿಯಾಗಿದೆ. ಆಯಾ ರಾಜ್ಯ ಭಾಷೆಯಲ್ಲೇ ಪರೀಕ್ಷೆ ನಡೆಸಬೇಕೆಂದು 1992ರಲ್ಲೇ ಕಾನೂನು ಜಾರಿಗೊಳಿಸಲಾಗಿದೆ. ಆದರೂ ಕೇಂದ್ರ ಸರ್ಕಾರ ಮಲತಾಯಿ ಧೋರಣೆ ಅನುಸರಿಸುತ್ತಿರುವುದು ಖಂಡನೀಯ ಎಂದರು.

ಜಿಲ್ಲಾಧಿಕಾರಿ ಕಚೇರಿ ಸಹಾಯಕ ರಮೇಶ್ ಅವರಿಗೆ ಮನವಿ ಸಲ್ಲಿಸಲಾಯಿತು. ಕದಂಬ ಸೈನ್ಯ ಜಿಲ್ಲಾಧ್ಯಕ್ಷ ಎ.ಹೆಚ್. ಗಣೇಶ್, ಸಾಂಸ್ಕೃತಿಕ ಕಾರ್ಯದರ್ಶಿ ಪ್ರತಿಮಾ ಹಾಸನ, ತಾಲ್ಲೂಕು ಅಧ್ಯಕ್ಷರಾದ ರಾಜೇಗೌಡ, ಪುಟ್ಟಸ್ವಾಮಿಗೌಡ, ವೆಂಕಟೇಗೌಡ, ವಿಶ್ವಾಸ್ ಡಿ.ಗೌಡ, ಕುಮಾರ್ ಮತ್ತಿತರರಿದ್ದರು.






## ಎಸ್‌ಎಸ್‌ಎಲ್‌ಸಿ ಮೊದಲ ಪರೀಕ್ಷೆ: 128 ಮಕ್ಕಳು ಗೈರು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಎಸ್‌ಎಸ್‌ಎಲ್‌ಸಿ ಮೊದಲ ಪರೀಕ್ಷೆ ಸುಸೂತ್ರವಾಗಿ ನಡೆದಿದ್ದು, ಜಿಲ್ಲೆಯಲ್ಲಿ 128 ವಿದ್ಯಾರ್ಥಿಗಳು ಗೈರಾಗಿದ್ದಾರೆ.

19,715 ಪರೀಕ್ಷಾರ್ಥಿಗಳ ಪೈಕಿ 19,587 ವಿದ್ಯಾರ್ಥಿಗಳು ಹಾಜರಾದರು. ಆಲೂರಿನಲ್ಲಿ 1, ಅರಸೀಕೆರೆ 26, ಅರಕಲಗೂಡು 13, ಬೇಲೂರು 13, ಚನ್ನರಾಯಪಟ್ಟಣ 12, ಹಾಸನ 32, ಹೊಳೆನರಸೀಪುರ 24 ಹಾಗು ಸಕಲೇಶಪುರ ತಾಲ್ಲೂಕಿನಲ್ಲಿ 7 ಮಕ್ಕಳು ಗೈರಾಗಿದ್ದಾರೆ.

ಜಿಲ್ಲೆಯ 78 ಪರೀಕ್ಷಾ ಕೇಂದ್ರಗಳಲ್ಲಿ ಸುಗಮವಾಗಿ ಪರೀಕ್ಷೆ ನಡೆದಿದ್ದು ಮಾ. 23ರಂದು ವಿಜ್ಞಾನ ಪರೀಕ್ಷೆ ನಡೆಯಲಿದೆ.

ಮೊದಲ ದಿನ ನಡೆದ ಕನ್ನಡ ಪರೀಕ್ಷೆಗೆ ವಿದ್ಯಾರ್ಥಿಗಳು ಅತ್ಯುತ್ಸಾಹದಿಂದ ಬಂದರು. ಜಿಲ್ಲಾದ್ಯಂತ 78 ಪರೀಕ್ಷಾ ಕೇಂದ್ರ ತೆರೆದಿದ್ದು ಕೆಲವೆಡೆ ಮಕ್ಕಳಿಗೆ ಹೂಗುಚ್ಛ ನೀಡಿ ಶುಭ ಕೋರಿದರು. ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಮಕ್ಕಳಿಗೆ ಆತ್ಮಸ್ಥೈರ್ಯ ತುಂಬಿದರು. ಪರೀಕ್ಷಾ ಕೇಂದ್ರದ ಸುತ್ತ 200 ಮೀ. ವ್ಯಾಪ್ತಿ ನಿಷೇಧಾಜ್ಞೆ ಜಾರಿಗೊಳಿಸಿದ್ದರಿಂದ ಪರೀಕ್ಷಾ ಸಮಯದಲ್ಲಿ ಸಾರ್ವಜನಿಕರ ಓಡಾಟ ನಿಷೇಧಿಸಲಾಗಿತ್ತು. ಹತ್ತಿರದ ಜೆರಾಕ್ಸ್ ಅಂಗಡಿಗಳನ್ನು ಬಂದ್ ಮಾಡಿಸಲಾಗಿತ್ತು. ಯಾವುದೇ ಅಕ್ರಮಗಳಿಗೆ ಅವಕಾಶ ನೀಡದೆ ಪರೀಕ್ಷೆ ನಡೆಸಲಾಯಿತು.

ಸಕಲೇಶಪುರ ತಾಲ್ಲೂಕಿನಲ್ಲಿ 599 ಹುಡುಗರು, 604 ಬಾಲಕಿಯರು ಸೇರಿ 1203 ವಿದ್ಯಾರ್ಥಿಗಳು ಪರೀಕ್ಷೆ ಬರೆದರು. ಈಗಾಗಲೇ ಮೂರು ಹಂತಗಳಲ್ಲಿ



ಪೂರ್ವ ಸಿದ್ಧತಾ ಪರೀಕ್ಷೆಗಳು ಯಶಸ್ವಿಯಾಗಿ ನಡೆದಿದ್ದರಿಂದ ವಿದ್ಯಾರ್ಥಿಗಳಿಗೆ ಉತ್ತಮ ತಯಾರಿ ಸಾಧ್ಯವಾಗಿದ್ದು, ಪರಿಣಾಮ ಪರೀಕ್ಷೆಯೂ ಸುಗಮವಾಗಿ ನಡೆಯಿತು.

ತಾಲ್ಲೂಕಿನ 9 ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಹಾಗು ವೆಬ್‌ಕಾಸ್ಟಿಂಗ್ ವ್ಯವಸ್ಥೆಗಳು ಸಮರ್ಪಕವಾಗಿ ಕಾರ್ಯನಿರ್ವಹಿಸಿದ್ದು, ಅಕ್ರಮ ಚಟುವಟಿಕೆಗಳಿಗೆ ಆಸ್ಪದ ನೀಡಲಿಲ್ಲ. ಪರೀಕ್ಷಾ ಕೇಂದ್ರಗಳಲ್ಲಿ ಶುದ್ಧ ಕುಡಿಯುವ ನೀರು, ಶೌಚಾಲಯ, ಸಮರ್ಪಕ ಪೀಠೋಪಕರಣ ಸೇರಿ ಎಲ್ಲಾ ಮೂಲಸೌಲಭ್ಯ ಒದಗಿಸಲಾಗಿತ್ತು.

ವಿದ್ಯಾರ್ಥಿಗಳ ಪ್ರಯಾಣಕ್ಕೆ ಕೆಎಸ್‌ಆರ್ ಟಿಸಿ ಮೂಲಕ ಉಚಿತ ಪ್ರಯಾಣ ವ್ಯವಸ್ಥೆ ಕಲ್ಪಿಸಲಾಗಿದ್ದು, ಅರಣ್ಯ ಪ್ರದೇಶಗಳಿಂದ ಬರುವ ವಿದ್ಯಾರ್ಥಿಗಳಿಗೆ ಅರಣ್ಯ ಇಲಾಖೆಯ ಸಹಕಾರವೂ ಲಭ್ಯವಾಯಿತು. ಆರೋಗ್ಯ ಇಲಾಖೆಯ ವತಿಯಿಂದ ಓಆರ್‌ಎಸ್ ಪೌಡರ್, ಔಷಧಿ ಹಾಗು ಅಗತ್ಯವಿದ್ದಲ್ಲಿ ಆರೋಗ್ಯ ಸಿಬ್ಬಂದಿ ವ್ಯವಸ್ಥೆ ಮಾಡಲಾಗಿತ್ತು.

ವಿದ್ಯಾರ್ಥಿಗಳು ಭಯ ಬಿಟ್ಟು ಆತ್ಮಸ್ಥೈರ್ಯದಿಂದ ಪರೀಕ್ಷೆ ಎದುರಿಸಿದಾಗ ಮಾತ್ರ ಉತ್ತಮ ಫಲಿತಾಂಶ ಪಡೆಯಲು ಸಾಧ್ಯವೆಂದು ಶಾಸಕ ಸಿ.ಎನ್.ಬಾಲಕೃಷ್ಣ ತಿಳಿಸಿದರು.


ಚನ್ನರಾಯಪಟ್ಟಣದ ಮಾಧ್ಯಮಿಕ ಶಾಲಾ ಆವರಣದಲ್ಲಿರುವ ಸರ್ಕಾರಿ ಪ್ರೌಢಶಾಲೆಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಗುಲಾಬಿ ನೀಡಿ ಶುಭ ಹಾರೈಸಿ ಮಾತನಾಡಿದ ಅವರು, ತಾಲ್ಲೂಕಿನಲ್ಲಿ 2808 ವಿದ್ಯಾರ್ಥಿಗಳು ಪರೀಕ್ಷೆ ತೆಗೆದುಕೊಂಡಿದ್ದು, 12 ಪರೀಕ್ಷಾ ಕೇಂದ್ರ ತೆರೆಯಲಾಗಿದೆ. 10ನೇ ತರಗತಿ ಜೀವನದ ಪ್ರಮುಖ ಘಟ್ಟ. ಪ್ರತಿಯೊಬ್ಬರೂ ಆತ್ಮವಿಶ್ವಾಸದಿಂದ ಪರೀಕ್ಷೆ ಬರೆಯಿರಿ ಎಂದು ಶುಭ ಹಾರೈಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಹೆಚ್.ಎನ್.ದೀಪ ಮಾತನಾಡಿ, ಎಸ್‌ಎಸ್‌ಎಲ್‌ಸಿ ಪರೀಕ್ಷೆ ಎಲ್ಲರ ಜೀವನದಲ್ಲೂ ಅತಿ ಮುಖ್ಯ ಘಟ್ಟ, ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಎಲ್ಲಾ ಕ್ರಮ ಕೈಗೊಳ್ಳಲಾಗಿದೆ ಎಂದರು.

ಕ್ಷೇತ್ರ ಸಂಪನ್ಮೂಲ ಸಮನ್ವಯ ಅಧಿಕಾರಿ ಕೆ.ಎನ್.ಅನಿಲ್, ಸರ್ಕಾರಿ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಬಿ.ಆರ್.ರಮೇಶ್, ಪ್ರಶ್ನೆ ಪತ್ರಿಕೆ ಅಭಿರಕ್ಷಕ ಕುಮಾರ್ ಇತರರಿದ್ದರು.

### ಅನಾರೋಗ್ಯದ ಮಧ್ಯೆ ಪರೀಕ್ಷೆಗೆ ಹಾಜರು

ಅನಾರೋಗ್ಯದಿಂದ ಹಾಸನದ ಖಾಸಗಿ ಆಸ್ಪತ್ರೆಯ ಐಸಿಯು ವಾರ್ಡ್‌ನಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ತಾಲ್ಲೂಕಿನ ರೋಟರಿ ಶಾಲೆಯ ಜುನೈದ್ ಎಂಬ ವಿದ್ಯಾರ್ಥಿ ಪರೀಕ್ಷೆ ಬರೆದನು. ತೀವ್ರ ಜ್ವರದಿಂದ ಬಳಲುತ್ತಿದ್ದರೂ ಪರೀಕ್ಷೆ ಬರೆಯಲು ಬಂದಿದ್ದ ಆತನ ಶಿಕ್ಷಣ ಪ್ರೇಮಕ್ಕೆ ಶಿಕ್ಷಕರು ಮೆಚ್ಚುಗೆ ಸೂಚಿಸಿದರು.




## ಹಳೇಬೀಡು ಪ್ರಥಮ ದರ್ಜೆ ಕಾಲೇಜಿನಲ್ಲಿ ಮಹಿಳಾ ದಿನಾಚರಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಳೇಬೀಡು: ಪ್ರತಿಯೊಬ್ಬರಲ್ಲಿಯೂ ಅವರದ್ದೇಯಾದ ಪ್ರತಿಭೆ ಇರುತ್ತದೆ. ರೀಲ್ಸ್ ನೋಡಿ ಬೇರೆಯವರನ್ನು ಬೆಳೆಸುವ ಬದಲು ನೀವೇ ಸೆಲೆಬ್ರಿಟಿಗಳಾಗಬೇಕೆಂದು ಇಂಗ್ಲಿಷ್ ಭಾಷಾ ಶಿಕ್ಷಕಿ ಮಮತಾ ಪ್ರಭು ಹೇಳಿದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಂತರಿಕ ಗುಣಮಟ್ಟದ ಭರವಸಾ ಕೋಶ, ಮಹಿಳಾ ದೌರ್ಜನ್ಯ ತಡೆ ಸಮಿತಿ ಹಾಗೂ ಶಾಂತಲಾ ರೋಜರ್ಸ್ ರೇಂಜರ್ಸ್ ಘಟಕದಿಂದ ಬುಧವಾರ ನಡೆದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯಲ್ಲಿ ಮಾತನಾಡಿದ ಅವರು, ಎಐನಿಂದ ಸಮರ್ಪಕ ಕೃಷಿ ನಡೆಸುವ



ಆವಿಷ್ಕಾರ ನಡೆದಿದೆ. ಆಧುನಿಕ ತಂತ್ರಜ್ಞಾನ ಅಳವಡಿಕೆಯಿಂದ ನೀರಿನ ಸಮರ್ಪಕ ಬಳಕೆಗೆ ಅನುಕೂಲ ಆಗಲಿದೆ ಎಂದರು.

ಕೃಷಿ ಕ್ಷೇತ್ರವನ್ನು ಕೀಳಾಗಿ ಕಾಣಬಾರದು. ಅನ್ನದಾತ ಇಲ್ಲದಿದ್ದರೆ ಯಾರೂ ಬದುಕುವುದು ಸಾಧ್ಯವಿಲ್ಲ. ರೈತ ಬೆಳೆದ ಉತ್ಪನ್ನ ಎಲ್ಲರಿಗೂ ಬೇಕು. ಆದರೆ ರೈತರಿಗೆ ಹೆಣ್ಣು ಕೊಡುವವರು ಮಾತ್ರ ಇಲ್ಲ. ಈ ಪರಿಸ್ಥಿತಿ ಬದಲಾದರೆ ಮಾತ್ರ ದೇಶ ಅಭಿವೃದ್ಧಿ ಹೊಂದಲು ಸಾಧ್ಯವೆಂದರು.

ಪ್ರಾಂಶುಪಾಲ ಡಾ. ಬಿ.ಕೆ. ಶ್ರೀನಿವಾಸ ಮಾತನಾಡಿ, ಮಮತಾ ಪ್ರಭು ಅವರ ದರೆಗುಟ್ಟಿ ಮಳೆ ಸುರಿದು ಪುಸ್ತಕಗಳು ಇಂದಿನ ವ್ಯವಸ್ಥೆಯನ್ನು ತಿದ್ದಿ ಬೆಳೆಸಲು ಉಪಯುಕ್ತವಾಗಿವೆ ಎಂದರು.

ವಿದ್ಯಾರ್ಥಿಗಳಾದ ವಿಶ್ವಾಸ್, ದೀಪ್ತಿ, ಉಮಾ, .ಎಂ.ವಿ.ಧಾನ್ಯ, ಇ.ಎಸ್‌ಯತಿರಾಜ್ ಮಾತನಾಡಿದರು.

ಹಿರಿಯ ಶ್ರೇಣಿ ಗ್ರಂಥಪಾಲಕ ಡಾ.ಮನೋಜ್ ಕುಮಾರ್, ಪತ್ರಕರ್ತ ಹೆಚ್. ಎಸ್.ಅನಿಲ್ ಕುಮಾರ್, ಪ್ರಾಧ್ಯಾಪಕರಾದ ಎಸ್. ಪದ್ಮಪ್ರಿಯ, ಕೆ.ಬಿ.ತಿಮ್ಮಾನಾಯ್ಕ, ಶಿವರಾಜ್, ಕೆ.ಬಿ.ದಶರಥ, ಶಂಕರಪ್ಪ, ರೋಹನ್, ಚಂದ್ರಶೇಖರ ಸಿಂಗ್, ಡಾ.ಎಂ.ಸಿ.ಕುಮಾರ್ ಇತರರಿದ್ದರು.

# ಪೆನ್‌ಡ್ರೈವ್ ಪ್ರಕರಣ: ಕೋರ್ಟ್‌ಗೆ ಚಾರ್ಜ್‌ಶೀಟ್ ಸಲ್ಲಿಕೆ

## 13,712 ಪುಟಗಳ ವರದಿ | 39 ಜನರ ವಿರುದ್ಧ ದೋಷಾರೋಪ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರ ಅಶ್ಲೀಲ ವಿಡಿಯೋ ಹಂಚಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಶೇಷ ತನಿಖಾ ದಳ (ಎಸ್‌ಐಟಿ) ಇಲ್ಲಿನ ಹಿರಿಯ ಸಿವಿಲ್ ನ್ಯಾಯಾಲಯಕ್ಕೆ 13,712 ಪುಟಗಳ ದೋಷಾರೋಪಣೆ ಪಟ್ಟಿ ಸಲ್ಲಿಸಿದೆ.

2024ರ ಲೋಕಸಭಾ ಚುನಾವಣೆಯಲ್ಲಿ ಜೆಡಿಎಸ್ ಚುನಾವಣೆ ಏಜೆಂಟ್ ಆಗಿದ್ದ ವಕೀಲ ಪೂರ್ಣಚಂದ್ರ ನೀಡಿದ ದೂರಿನ ಆಧಾರದ ಮೇಲೆ ತನಿಖೆ ಕೈಗೊಳ್ಳಲಾಗಿತ್ತು. ಪ್ರಕರಣದಲ್ಲಿ ಒಟ್ಟು 52 ಆರೋಪಿಗಳ ಹೆಸರು ದೋಷಾರೋಪಣೆ ಪಟ್ಟಿಯಲ್ಲಿ ಉಲ್ಲೇಖವಾಗಿದ್ದು, ಅವರಲ್ಲಿ 39 ಜನರ ವಿರುದ್ಧ ಆರೋಪಗಳನ್ನು ದೃಢಪಡಿಸಿ ಚಾರ್ಜ್‌ಶೀಟ್ ಸಲ್ಲಿಸಲಾಗಿದೆ.

ಅಶ್ಲೀಲ ವಿಡಿಯೋ ಹಂಚಿಕೆಗಾಗಿ ಆರೋಪಿಗಳು ಸುಮಾರು 70 ಪೆನ್ ಡ್ರೈವ್‌ಗಳನ್ನು ಖರೀದಿಸಿದ್ದರು ಎಂಬುದು ತನಿಖೆಯಲ್ಲಿ ಬಹಿರಂಗವಾಗಿದೆ. ಈ ಪೆನ್‌ಡ್ರೈವ್‌ಗಳನ್ನು ಹಾಸನದಲ್ಲೇ ಖರೀದಿಸಿದ್ದ ಮಾಹಿತಿ ಕೂಡ ಪತ್ತೆಯಾಗಿದೆ. ವಿಚಾರಣೆ ವೇಳೆ 277 ಜನ ಸಾಕ್ಷಿಗಳ ಹೇಳಿಕೆಗಳನ್ನು ದಾಖಲಿಸಿರುವುದಾಗಿ ಚಾರ್ಜ್‌ಶೀಟ್‌ನಲ್ಲಿ ಉಲ್ಲೇಖಿಸಲಾಗಿದೆ.

ನವೀನ್ ಪ್ರಮುಖ ಆರೋಪಿಯಾಗಿದ್ದು, ಪ್ರಜ್ವಲ್ ರೇವಣ್ಣ ಕಾರು ಚಾಲಕ ಕಾರ್ತಿಕ ಎರಡನೇ ಆರೋಪಿ. ಈ ಪ್ರಕರಣದಲ್ಲಿ ಬಿಜೆಪಿ ಮುಖಂಡ ದೇವರಾಜೇಗೌಡ ಅವರನ್ನು 8 ನೇ ಆರೋಪಿಯನ್ನಾಗಿ ಮಾಡಲಾಗಿದೆ. ದೋಷಾರೋಪಣೆ ಪಟ್ಟಿ ಸಲ್ಲಿಕೆಯಾಗಿರುವ ಆರೋಪಿಗಳಲ್ಲಿ ಹಲವರು ಬಿಜೆಪಿ, ಕಾಂಗ್ರೆಸ್ ಪಕ್ಷಕ್ಕೆ ಸೇರಿದ್ದಾರೆ.

**ಕೆಲವರ ಹೆಸರು ಕೈಬಿಟ್ಟ ಎಸ್‌ಐಟಿ ಆಕ್ಷೇಪ**

ಪ್ರಕರಣ ಸಂಬಂಧ ದೋಷಾರೋಪಣೆ ಪಟ್ಟಿ ಸಲ್ಲಿಸಿರುವ ಎಸ್‌ಐಟಿ ಕೆಲವರ ಹೆಸರನ್ನು ಕೈಬಿಟ್ಟಿದೆ ಎಂದು ದೂರುದಾರ ಪೂರ್ಣಚಂದ್ರ ಅಸಮಾಧಾನ ವ್ಯಕ್ತಪಡಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಕರಣದ ಕಿಂಗ್‌ಪಿನ್ ಯಾರು ಎಂಬುದು ಬಹಿರಂಗವಾಗಬೇಕು. ಪ್ರಕರಣದ ಸೂತ್ರಧಾರರನ್ನು ಪತ್ತೆ ಹಚ್ಚಿ ಜನರ ಮುಂದೆ ತರಬೇಕು ಎಂದು ಆಗ್ರಹಿಸಿದರು.

ಲೋಕಸಭಾ ಚುನಾವಣೆಯ ವೇಳೆ ಜೆಡಿಎಸ್ ಅಭ್ಯರ್ಥಿಯನ್ನು ಸೋಲಿಸಲು ಸಂಚು ರೂಪಿಸಿ ರಸ್ತೆ ರಸ್ತೆಗಳಲ್ಲಿ ಪೆನ್‌ಡ್ರೈವ್ ಹಂಚಿಕೆ ಮಾಡಲಾಗಿದೆ. ಈ ಸಂಬಂಧ ಸೆನ್ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದು, ಅದರ ಆಧಾರದಲ್ಲಿ ಎಸ್ ಐಟಿ ತನಿಖೆ ನಡೆಸಿ ಚಾರ್ಜ್‌ಶೀಟ್ ಸಲ್ಲಿಸಿರುವುದನ್ನು ಅವರು ಸ್ವಾಗತಿಸಿದರು. ದೂರಿನಲ್ಲಿ ಉಲ್ಲೇಖಿಸಿದ್ದ ಕೆಲವರ ಹೆಸರನ್ನು ಚಾರ್ಜ್‌ಶೀಟ್‌ನಲ್ಲಿ ಕೈಬಿಟ್ಟಿರುವುದಾಗಿ ಅಸಮಾಧಾನ ವ್ಯಕ್ತಪಡಿಸಿದ ಅವರು, ಇನ್ನಷ್ಟು ಆಳವಾದ ತನಿಖೆ ನಡೆಸಿ ಹೆಚ್ಚುವರಿ ದೋಷಾರೋಪಣೆ ಪಟ್ಟಿ ಸಲ್ಲಿಸಬೇಕು ಎಂದು ಒತ್ತಾಯಿಸಿದರು.

39 ಆರೋಪಿಗಳಿಗೆ ಶಿಕ್ಷೆಯಾಗಲಿದೆ. ಆದರೆ ಪ್ರಭಾವಿ ವ್ಯಕ್ತಿಗಳ ಹೆಸರೂ ಹೊರಬರಬೇಕು. ಯಾವುದೇ ಒತ್ತಡಕ್ಕೂ ಒಳಗಾಗದೇ ತನಿಖೆ ಪೂರ್ಣಗೊಳ್ಳಬೇಕು. ಈ ಬಗ್ಗೆ ನ್ಯಾಯಾಲಯದಲ್ಲಿ ಸಾಕ್ಷಿ ನೀಡಲಾಗುವುದು. ಸಾಕ್ಷಿದಾರರಿಗೆ ಸರ್ಕಾರ ಭದ್ರತೆ ಒದಗಿಸಬೇಕು ಎಂದು ಆಗ್ರಹಿಸಿದರು.

## ಅಧಿಕಾರಿಗಳ ವಿರುದ್ಧ ಹೈಕೋರ್ಟ್‌ನಲ್ಲಿ ಅರ್ಜಿ: ದೇವರಾಜೇಗೌಡ



ತಮ್ಮನ್ನು ಅನ್ಯಾಯವಾಗಿ ಆರೋಪಿ ಪಟ್ಟಿಯಲ್ಲಿ ಸೇರಿಸಲಾಗಿದೆ. ಈ ಪ್ರಕರಣದಲ್ಲಿ ಯಾರು ಭಾಗಿಯಾಗಿದ್ದಾರೆ ಎಂಬುದು ಸಾರ್ವಜನಿಕರಿಗೆ ಗೊತ್ತಿರುವ ವಿಚಾರವಾಗಿದ್ದು, ರಾಜ್ಯ ರಾಜಕಾರಣದಲ್ಲಿ ದೊಡ್ಡ ಸಂಚಲನ ಮೂಡಿಸಿದ ಪ್ರಕರಣ ಇದಾಗಿದೆ ಎಂದು ಪ್ರಕರಣದ ಆರೋಪಿಯೂ ಆಗಿರುವ ಬಿಜೆಪಿ ಮುಖಂಡ ದೇವರಾಜೇಗೌಡ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಡಿ.ಕೆ.ಶಿವಕುಮಾರ್ ಮೊದಲನೇಯವರಾಗಿದ್ದರು. ಖಾಸಗಿ ಚಾನೆಲ್‌ಗೆ ಪೆನ್‌ಡ್ರೈವ್ ಹೇಗೆ ತಲುಪಿತು ಎಂಬುದರ ಕುರಿತು ಯಾರೂ ಪ್ರಶ್ನಿಸಿಲ್ಲ. ಹಾಸನದಲ್ಲಿ ಪೆನ್‌ಡ್ರೈವ್ ತಯಾರಿ ಹಾಗೂ ಹಂಚಿಕೆ ಬಗ್ಗೆ ಎಲ್.ಆರ್. ಶಿವರಾಮೇಗೌಡ ಮಾತನಾಡಿದ ಆಡಿಯೋ ವೈರಲ್ ಆಗಿದ್ದರೂ, ತನಿಖೆಯಲ್ಲಿ ಅದನ್ನು ಗಂಭೀರವಾಗಿ ಪರಿಗಣಿಸಿಲ್ಲ ಎಂದು ಆರೋಪಿಸಿದರು.

ರಾಜ್ಯ ಸರ್ಕಾರ ಎಸ್‌ಐಟಿ ರಚನೆ ಮಾಡಿದ್ದರೂ, ಒಂದು ಕುಟುಂಬವನ್ನು ರಾಜಕೀಯವಾಗಿ ಮುಗಿಸಲು ಪ್ರಯತ್ನ ನಡೆದಿದೆ. ತಪ್ಪಿತಸ್ಥರು ಯಾರೇ ಇದ್ದರೂ ಕಾನೂನು ಮುಂದೆ ತಲೆಬಾಗಬೇಕು, ಶಿಕ್ಷೆ ಅನುಭವಿಸಬೇಕು ಎಂದರು.

ನನ್ನಿಂದ ಯಾರಿಗೂ ಪೆನ್‌ಡ್ರೈವ್ ಅಥವಾ ವಿಡಿಯೋ ಹೋಗಿದ್ದರೆ ಅದನ್ನು ಸಾರ್ವಜನಿಕವಾಗಿ ಬಿಡುಗಡೆ ಮಾಡಲಿ. ನನ್ನ ಮೊಬೈಲ್ ಮತ್ತು ಕಂಪ್ಯೂಟರ್ ವಶಕ್ಕೆ ಪಡೆದಿದ್ದು, ಅದರಲ್ಲಿ ಏನನ್ನಾದರೂ ಸೇರಿಸುವ ಸಾಧ್ಯತೆ ಇದೆ ಎಂಬ ಅನುಮಾನ ವ್ಯಕ್ತಪಡಿಸಿದರು.

ಈ ಪ್ರಕರಣದಲ್ಲಿ ಕಾರ್ತಿಕ್ ಗೌಡ ಕಿಂಗ್‌ಪಿನ್. ಪ್ರಮುಖ ಆರೋಪಿಗಳ ಪಟ್ಟಿಯಲ್ಲಿ ಪ್ರೀತಂ ಗೌಡ ಸೇರಿದಂತೆ ಕೆಲವರ ಹೆಸರುಗಳು ಕಾಣೆಯಾಗಿವೆ. ಹೋಟೆಲ್ ಅಶೋಕದಲ್ಲಿ ಪೆನ್ ಡ್ರೈವ್ ಹಂಚಿಕೆ ನಡೆದ ಮಾಹಿತಿ ಇದ್ದರೂ, ಆ ಸ್ಥಳವನ್ನು ಕಸ್ಟಡಿಗೆ ಪಡೆಯಲಿಲ್ಲ. ಸಂಸದ ಶ್ರೇಯಸ್ ಪಟೇಲ್ ಅವರಿಗೆ ನೋಟಿಸ್ ನೀಡದಿರುವುದು, ಅಂದಿನ ಎಸ್‌ಪಿ ಮೊಹಮ್ಮದ್ ಸುಜೀತಾ ಅವರ ಪಾತ್ರದ ಕುರಿತು ತನಿಖೆ ನಡೆಸದಿರುವುದು ಸೇರಿದಂತೆ ಹಲವು ಅಂಶಗಳನ್ನು ಪ್ರಶ್ನಿಸಿದರು.

ತನಿಖೆ ನಡೆಸಿದ ಅಧಿಕಾರಿಗಳು ಕಾಂಗ್ರೆಸ್ ಪಕ್ಷದ ಪ್ರಭಾವದಲ್ಲಿ ಕೆಲಸ ಮಾಡಿದ್ದಾರೆ. ನಿಜವಾಗಿ ಪೆನ್‌ಡ್ರೈವ್ ಹಂಚಿಕೆ ಮಾಡಿದವರ ಹೆಸರು ಚಾರ್ಜ್‌ಶೀಟ್‌ನಲ್ಲಿ ಇಲ್ಲ. ತನಿಖೆ ನಡೆಸಿದ ಅಧಿಕಾರಿಗಳ ವಿರುದ್ಧವೇ ತನಿಖೆ ನಡೆಸುವಂತೆ ಹೈಕೋರ್ಟ್‌ನಲ್ಲಿ ರಿಟ್ ಅರ್ಜಿ ಸಲ್ಲಿಸುವುದಾಗಿ ದೇವರಾಜೇಗೌಡ ತಿಳಿಸಿದರು.

## ಎಚ್.ಐ.ವಿ. ಕುರಿತು ಜಾಗೃತಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ವಿದ್ಯಾರ್ಥಿಗಳು ಪ್ರತಿನಿತ್ಯ ಬಾಹ್ಯ ಪ್ರಪಂಚದ ಆಕರ್ಷಣೆಗೆ ಒಳಗಾಗಿ ಮಾನವೀಯ ಮೌಲ್ಯಗಳನ್ನು, ತಂದೆ-ತಾಯಿಯರ ಶ್ರಮವನ್ನು ಮರೆತು ತಮ್ಮ ಬದುಕನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ ಎಂದು ಹಾಸನ ಡ್ಯಾಪ್ಕೊದ ಮೇಲ್ವಿಚಾರಕ ವಿ. ರವಿಕುಮಾರ್ ಬಲ್ಲೇನಹಳ್ಳಿ ಆತಂಕ ವ್ಯಕ್ತಪಡಿಸಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ರೆಡ್ ರಿಬ್ಬನ್ ಕ್ಲಬ್ ವತಿಯಿಂದ, ಕಾಲೇಜು ವಿದ್ಯಾರ್ಥಿಗಳಿಗೆ ಎಚ್.ಐ.ವಿ./ಏಡ್ಸ್ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಪದವಿ ಎನ್ನುವುದು ಇಂದು ಬರಿ ಬಣ್ಣ ಬಟ್ಟೆಗಳಿಗೆ ಸೀಮಿತವಾಗುತ್ತಿದೆ. ಎಚ್.ಐ.ವಿ./ಏಡ್ಸ್ ಬಗ್ಗೆ ಮಾತನಾಡುವ ಬಾಯಿಗಳು ಜಾಸ್ತಿ ಇದ್ದು, ಕೇಳಿಸಿಕೊಳ್ಳುವ ಕಿವಿಗಳು ಕಡಿಮೆ ಇವೆ. ಒಳ್ಳೆಯ ವಿಚಾರಗಳಿಗಿಂತ ಕೆಟ್ಟ ವಿಚಾರಗಳು ಬೇಗ ಆಕರ್ಷಿಸುತ್ತವೆ. ಎಚ್.ಐ.ವಿ. ಬಗ್ಗೆ ತಿಳಿದುಕೊಳ್ಳುವುದಕ್ಕಿಂತ ತುತ್ತಾಗುವ ಮಾರ್ಗಕ್ಕೆ ನಾವು ಹತ್ತಿರವಾಗುತ್ತಿದ್ದೇವೆ. ಎಚ್.ಐ.ವಿ. ಅದು ರೋಗವಲ್ಲ, ನಮ್ಮ ನಡವಳಿಕೆಯಿಂದ ಬರುವ ಬಳುವಳಿ. ಏಡ್ಸ್ ಬಂದ ಮೇಲೆ ಆಲೋಚಿಸುವುದಕ್ಕಿಂತ ಬರದಂತೆ ತಡೆಯುವುದು ಸೂಕ್ತ. ಆ ರೀತಿ ತಡೆಯಲು ಇರುವ ಮಾರ್ಗವೆಂದರೆ ಸಂಯಮ ಮತ್ತು ತಿಳಿವಳಿಕೆ ಎಂದರು.

ಪ್ರಾಂಶುಪಾಲ ಪ್ರೊ. ಟಿ ಪಿ. ಪುಟ್ಟರಾಜು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು. ಕಾರ್ಯಕ್ರಮದಲ್ಲಿ ತಾಲ್ಲೂಕು ಆಸ್ಪತ್ರೆ ಐ.ಸಿ.ಟಿ.ಸಿ. ಮೇಲ್ವಿಚಾರಕಿ ಗೌರಿ, ರಕ್ತ ಸಂಗ್ರಹ ಘಟಕದ ಪ್ರಯೋಗಾಲಯದ ತಂತ್ರಜ್ಞರಾದ ಕೆ. ಎನ್. ಸುಪ್ರಿಯಾ, ಅಧ್ಯಾಪಕರು, ಕಚೇರಿ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಕಾರು ಡಿಕ್ಕಿಯಾಗಿ ಮಹಿಳೆ ಸಾವು

ಚನ್ನರಾಯಪಟ್ಟಣ: ಮನೆ ಮುಂದೆ ರಸ್ತೆ ಪಕ್ಕ ನಿಂತಿದ್ದಾಗ ವೇಗವಾಗಿ ಬಂದ ಕಾರು ಡಿಕ್ಕಿಯಾಗಿ ಮಹಿಳೆ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಮಲ್ಲೇನಹಳ್ಳಿ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಚನ್ನಮ್ಮ ಮೃತರು. ಲಕ್ಷ್ಮೀದೇವಿ ದೇವಸ್ಥಾನದ ರಸ್ತೆಯಿಂದ ಚಾಲಕ ಅಜಾಗರೂಕತೆಯಿಂದ ಕಾರು ಓಡಿಸಿಕೊಂಡು ಬಂದು ಮಹಿಳೆಗೆ ಡಿಕ್ಕಿ ಮಾಡಿದ್ದಾನೆ. ಬಲಗೈ, ಕಾಲು, ಹೊಟ್ಟೆ ಭಾಗಕ್ಕೆ ಬಲವಾದ ಪೆಟ್ಟು ಬಿದ್ದಿದ್ದರಿಂದ ಮಹಿಳೆಯನ್ನು ಆಸ್ಪತ್ರೆಗೆ ದಾಖಲಿಸಲಾಯಿತಾದರೂ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಆತ್ಮಸ್ಥೈರ್ಯದಿಂದ ಪರೀಕ್ಷೆ ಬರೆಯಲು ಸಲಹೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಅಂಜಿಕೆ ಬೇಡ ಆತ್ಮವಿಶ್ವಾಸದಿಂದ ಪರೀಕ್ಷೆ ಬರೆಯಿರಿ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಮೋಹನ್ ಕುಮಾರ್ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬರೆಯುತ್ತಿರುವ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ನಗರದ ಬಾಯ್ಸ್ ಜೂನಿಯರ್ ಕಾಲೇಜ್ ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷೆ ಬರೆಯಲು ಬಂದ ವಿದ್ಯಾರ್ಥಿಗಳಿಗೆ ಶಿಕ್ಷಣ ಇಲಾಖೆ ಅಧಿಕಾರಿಗಳು ಹಾಗೂ ಶಿಕ್ಷಣ ಸುಧಾರಣಾ ಸಮಿತಿಯ ಸದಸ್ಯರು ಗುಲಾಬಿ ಹೂವು ನೀಡುವ ಮೂಲಕ ವಿದ್ಯಾರ್ಥಿಗಳನ್ನು ಬರಮಾಡಿಕೊಂಡರಲ್ಲದೆ ಶುಭ ಹಾರೈಸಿದರು.

ಬಿಇಒ ನಗರದಲ್ಲಿ ನಾಲ್ಕು ಪರೀಕ್ಷಾ ಕೇಂದ್ರಗಳು ಒಳಗೊಂಡಂತೆ ತಾಲೂಕಿನಲ್ಲಿ ಒಟ್ಟು 11 ಪರೀಕ್ಷಾ ಕೇಂದ್ರಗಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ ನಡೆಯಲಿದ್ದು ತಾಲೂಕಿನ 3351 ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿದ್ದಾರೆ ಎಂದು ಮಾಹಿತಿ ನೀಡಿದರು.

ಶಿಕ್ಷಣ ಸುಧಾರಣಾ ಸಮಿತಿಯ ಸದಸ್ಯ ವೈ.ಕೆ. ದೇವರಾಜ್ ಮಾತನಾಡಿ, ವಿದ್ಯಾರ್ಥಿ ಜೀವನದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಪ್ರಮುಖ ಘಟ್ಟವಾಗಿದ್ದು ಪರೀಕ್ಷೆ ಬರೆಯಲು ಬರುವ ವಿದ್ಯಾರ್ಥಿಗಳಿಗೆ ಪರೀಕ್ಷಾ ಕೇಂದ್ರದಲ್ಲಿ ಯಾವುದೇ ರೀತಿಯ ತೊಂದರೆಯಾಗದಂತೆ ಈಗಾಗಲೇ ಶಿಕ್ಷಣ ಇಲಾಖೆ ಅಗತ್ಯವಾದ ಎಲ್ಲಾ ಕ್ರಮ ಕೈಗೊಂಡಿದೆ.

ವಿದ್ಯಾರ್ಥಿಗಳು ಸಹ ನಿರ್ಭೀತಿಯಿಂದ ಪರೀಕ್ಷೆಯನ್ನು ಬರೆದು ತಾವು ಓದಿದ ಶಾಲೆ ಹಾಗೂ ತಮ್ಮ ಪೋಷಕರಿಗೆ ಕೀರ್ತಿ ಬರುವಂತೆ ಪರೀಕ್ಷೆ ಬರೆಯಿರಿ ಎಂದು ಶುಭ ಹಾರೈಸಿದರು

## ಹಿಂದುಗಳ ಪವಿತ್ರ ಹಬ್ಬ ಯುಗಾದಿ: ಶ್ರೀಧರಮೂರ್ತಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಯುಗಾದಿ ಹಬ್ಬದಿಂದ ಹಿಂದುಗಳ ಹೊಸ ವರ್ಷ ಪ್ರಾರಂಭವಾಗಲಿದೆ. ಅದನ್ನು ಆಚರಣೆ ಮಾಡುವ ಬದಲಾಗಿ ಯುವ ಸಮುದಾಯ ಮೋಜು ಮಸ್ತಿಗಾಗಿ ಡಿಸೆಂಬರ್ ಅಂತ್ಯದ ದಿವಸ ತಡರಾತ್ರಿ ವರೆಗೆ ಸಂಭ್ರಮ ಅಚರಣೆ ಮಾಡುತ್ತಿರುವುದು ವಿಷಾದನೀಯ ಎಂದು ಧಾರ್ಮಿಕ ದತ್ತಿ ಇಲಾಖೆ ಅಧೀನದ ಹಿಂದು ದೇವಾಲಯ ಅರ್ಚಕ ಸಂಘ ತಾಲೂಕು ಅಧ್ಯಕ್ಷ ವಿ.ಎನ್.ಶ್ರೀಧರಮೂರ್ತಿ ಎಂದು ಕಳವಳ ವ್ಯಕ್ತ ಪಡಿಸಿದರು.

ಪಟ್ಟಣದ ಶ್ರೀ ರಾವುತರ ಕೊಳದ ಆಂಜನೇಯ ಸ್ವಾಮಿ ದೇವಾಲಯದ ಸಮೀಪದಲ್ಲಿ ಈಶಾವಾಸ್ಯಂನಲ್ಲಿ ರಾಜ್ಯ ಖಾಸಗಿ ಹಿಂದು ದೇವಾಲಯ ಅರ್ಚಕರ ಒಕ್ಕೂಟದಿಂದ ಹಮ್ಮಿಕೊಂಡಿದ್ದ ಉಚಿತ



ಪಂಚಾಗ ವಿತರಣೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಸನಾತನ ಧರ್ಮ ಅಚರಣೆಗಳು ಪ್ರಕೃತಿಗೆ ಪೂರಕವಾಗಿವೆ, ನವವಸಂತಕ್ಕೆ ಮನುಷ್ಯ ಮಾತ್ರ ಸಿದ್ದನಾಗುವುದಿಲ್ಲ ಇಡೀ ಪ್ರಕೃತಿಯೇ ಸಿದ್ದವಾಗಿರುತ್ತದೆ ಇದನ್ನು ಮನಗಾಣ ಬೇಕು ಎಂದು ಹೇಳಿದರು.

ಭಾರತದಲ್ಲಿ ಶಿಕ್ಷಣವಂತರ ಸಂಖ್ಯೆ ಹೆಚ್ಚುತ್ತಿದೆ ಹೊರತು ಸಂಸ್ಕಾರವಂತರ ಸಂಖ್ಯೆ ಹೆಚ್ಚುತ್ತಿಲ್ಲ. ಹಾಗಾಗಿ ನಮ್ಮ ಸಂಪ್ರದಾಯ ಈ ಮಣ್ಣಿನ ಸೊಗಡಿಗೆ ವಿರುದ್ಧ ಹೋಗಬಾರದು. ಆದರೆ ಶಿಕ್ಷಣವಂತರೇ ಹೆಚ್ಚು ತಪ್ಪು ಮಾಡುತ್ತಿದ್ದಾರೆ. ಹೊಸ ವರ್ಷವನ್ನು ತಡರಾತ್ರಿಯಲ್ಲಿ ಆಚರಣೆ ಮಾಡುವುದು ಅದೂ ಕೂಡ ಮೋಜು ಮಸ್ತಿಯಲ್ಲಿ ಗಂಡು ಹೆಣ್ಣು ಇಬ್ಬರೂ ಒಟ್ಟಾಗಿ ಮದ್ಯ ಸೇವನೆ ಮಾಡಿ ಕೇಕ್ ಕತ್ತರಿಸಿ ಆಚರಣೆ ಮಾಡುವುದು ಎಷ್ಟು ಸರಿ ಎಂದು ಪ್ರಶ್ನಿಸಿದರು.

ತಂದೆ-ತಾಯಂದಿರು ತಮ್ಮ ಮಕ್ಕಳಿಗೆ ಶಿಕ್ಷಣ ಕೊಡಿಸುವುದರೊಂದಿಗೆ ಸನಾತನ ಧರ್ಮದ ಸಂಪ್ರದಾಯಗಳನ್ನು ಕೊಡಿಸಬೇಕು. ಇಲ್ಲದೆ ಹೋದರೆ ಮುಂದೊಂದು ದಿವಸ ಭಾರತದ ಸಂಸ್ಕೃತಿ ಸಂಪೂರ್ಣ ನಾಶವಾಗಿ ವಿದೇಶಿಗರ ಸಂಸ್ಕೃತಿ ನಮ್ಮನ್ನು ಆಳುತ್ತದೆ. ಈ ದೇಶದಲ್ಲಿ ಸಾಕಷ್ಟು ಸಂಘ ಸಂಸ್ಥೆಗಳಿವೆ.

ಅವುಗಳಲ್ಲಿ ಬೆರಳೆಣಿಕೆಯಷ್ಟು ಮಾತ್ರ ಸನಾತನ ಧರ್ಮ ಪ್ರಚಾರ ಮಾಡುತ್ತಿವೆ, ಯುವ ಸಮುದಾಯ ಈಗಲಾದರೂ ಎಚ್ಚೆತ್ತುಕೊಳ್ಳದೆ ಹೋದರೆ ದೇಶಕ್ಕೆ ಅಪಾಯ ಎದುರಾಗಲಿದೆ ಎಂದರು.

ಖಾಸಗಿ ಹಿಂದು ದೇವಾಲಯಗಳ ಅರ್ಚಕರ ಒಕ್ಕೂಟದ ರಾಜ್ಯಾಧ್ಯಕ್ಷ ವಿಶ್ವನಾಥ್ ದೀಕ್ಷಿತ್ ಮಾತನಾಡಿ, ಹಿಂದುಗಳ ಆಚರಣೆಗಳನ್ನು ತಿಳಿಯಲು ಪಂಚಾಗ ಸಾಕಷ್ಟು ಉಪಯೋಗ ಆಗುತ್ತಿರುವುದರಿಂದ ಒಕ್ಕೂಟದ ವತಿಯಿಂದ ಉಚಿತವಾಗಿ ವಿತರಣೆ ಮಾಡಲಾಗುತ್ತಿದೆ. ಯುಗಾದಿ ಹಬ್ಬದ ದಿವಸ ಪಂಚಾಗಕ್ಕೆ ಪೂಜೆ ಮಾಡುವುದು ನಮ್ಮ ಸಂಪ್ರದಾಯವಾಗಿದೆ. ಅಂದು ಪಂಚಾಗ ಶ್ರವಣವನ್ನು ಪಟ್ಟಣದ ಕೋಟೆಚನ್ನಕೇಶವ ದೇವಾಲಯದಲ್ಲಿ ಮಾಡಲಿದ್ದು ಸಾರ್ವಜನಿಕರು ಇದರ ಲಾಭ ಪಡೆಯುಬಹುದಾಗಿದೆ ಎಂದರು.

ಗಾಯತ್ರಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸಿ.ಎನ್.ನಾಗರಾಜು, ಒಕ್ಕೂಟದ ಪದಾಧಿಕಾರಿಗಳಾದ ಶ್ರೀನಿವಾಸ್, ಯಶ್ವಂತ್ ಕುಮಾರ್, ಡಾ.ದಿನೇಶ್, ಲೋಕೇಶ್ ಭಟ್, ಎಂ.ಎನ್. ವೆಂಕಟೇಶ್ ಮೂರ್ತಿ, ಸುಧೀಂದ್ರ, ನಾಗರಾಜು, ವಿಜಯಕುಮಾರ್, ಮಂಜುನಾಥ್, ದತ್ತಾತ್ರೇಯ, ಮಹೇಶ್ ದತ್ತ, ಕೆ.ಶಾಮಸುಂದರ್ ಉಪಸ್ಥಿತರಿದ್ದರು.

## ಮಹನೀಯರ ಜಯಂತಿ ಆಚರಣೆಗೆ ಸಿದ್ಧತೆ ಕೈಗೊಳ್ಳಿ

ಹಾಸನ: ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಬಾಬು ಜಗಜೀವನ್ ರಾಮ್ ಅವರ ಜಯಂತಿ ಆಚರಣೆಗೆ ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕ ಚಂದ್ರಮೌಳಿ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಬಾಬು ಜಗಜೀವನ್ ರಾಮ್ ಅವರ ಜಯಂತಿಗಳ ಆಚರಣೆ ಸಭೆಯಲ್ಲಿ ಮಾತನಾಡಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಕಚೇರಿ ಸಹಾಯಕ ರಮೇಶ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಪಿ. ದೂದ್‌ಪೀರ್, ವಿವಿಧ ಸಂಘ ಸಂಸ್ಥೆಗಳ ಮುಖಂಡರುಗಳು ಉಪಸ್ಥಿತರಿದ್ದರು.

## ಇತಿಹಾಸದಲ್ಲಿ ಈ ದಿನ

### ಮಾರ್ಚ್-19

1915: ಪ್ಲುಟೋ ಗ್ರಹದ ಮೊದಲ ಫೋಟೋಗಳನ್ನು ತೆಗೆದ ದಿನ
2003: ಅಮೆರಿಕಾ ನೇತೃತ್ವದ ಪಡೆಗಳು ಇರಾಕ್ ಮೇಲೆ ದಾಳಿ ಆರಂಭಿಸಿದವು

**ಜನನ**

1900: ಫ್ರೆಡ್ರಿಕ್ ಜೋಲಿಯೊ-ಕ್ಯೂರಿ, ನೊಬೆಲ್ ಪ್ರಶಸ್ತಿ ವಿಜೇತ ವಿಜ್ಞಾನಿ
1934: ಉರ್ಸುಲಾ ಆಂಡ್ರೆಸ್, ಖ್ಯಾತ ನಟಿ
1947: ಗ್ಲೆನ್ ಕ್ಲೋಸ್, ಹಾಲಿವುಡ್ ನಟಿ
1955 ರಂಗನಾಥ ಮಿಶ್ರಾ, ಭಾರತದ ಮಾಜಿ ಮುಖ್ಯ ನ್ಯಾಯಮೂರ್ತಿ
1962: ಬ್ರೂಸ್ ವಿಲ್ಲಿಸ್, ಖ್ಯಾತ ನಟ
1977: ಅಭಿನವ್ ಬಿಂದ್ರಾ, ಒಲಿಂಪಿಕ್ ಚಿನ್ನದ ಪದಕ ವಿಜೇತ

**ನಿಧನ**

1915: ಪರ್ಸಿವಲ್ ಲೋವೆಲ್, ಖಗೋಳ ವಿಜ್ಞಾನಿ
1998 ಡಡ್ಲಿ ಮೂರ್, ಖ್ಯಾತ ನಟ
2018: ಸ್ಟೀಫನ್ ಹಾಕಿಂಗ್, ವಿಶ್ವ ಪ್ರಸಿದ್ಧ ವಿಜ್ಞಾನಿ

## ಮತ್ಸ್ಯ ಸಂಜೀವಿನಿ ಯೋಜನೆ ಆರ್ಥಿಕ ಅಭಿವೃದ್ಧಿಗೆ ಸಹಕಾರಿ: ಪಿ.ಆರ್. ಗೋಪಾಲ್




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಸರ್ಕಾರ ಗ್ರಾಮೀಣ ಜನರ ಆರ್ಥಿಕ ಅಭಿವೃದ್ಧಿಗಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದ್ದು, ಮತ್ಸ್ಯ ಸಂಜೀವಿನಿ ಯೋಜನೆಯು ಪ್ರಮುಖವಾಗಿದೆ ಎಂದು ತಾಲ್ಲೂಕು ಪಂಚಾಯಿತಿ ಯೋಜನೆ ಅಧಿಕಾರಿ ಪಿ.ಆರ್. ಗೋಪಾಲ್ ಹೇಳಿದರು.

ತಾಲೂಕಿನ ಸಂಕನಹಳ್ಳಿ, ಬಂಡಿಶೆಟ್ಟಿಹಳ್ಳಿ, ಬಿದರಕ್ಕ ಮತ್ತು ಬೇಡಿಗನಹಳ್ಳಿ ಗ್ರಾಮಗಳ ಕೆರೆಗಳಲ್ಲಿ ಸ್ವಸಹಾಯ ಗುಂಪುಗಳಿಗೆ ಗ್ರಾಮೀಣ ಮಹಿಳೆಯರ ಆರ್ಥಿಕ ಸಬಲಿಕರಣ ಮತ್ತು ಸ್ವ ಉದ್ಯೋಗಾವಕಾಶಗಳನ್ನು ಹೆಚ್ಚಿಸುವ ಉದ್ದೇಶದಿಂದ ಸರ್ಕಾರ ಜಾರಿಗೆ ತಂದಿರುವ ಮತ್ಸ್ಯ ಸಂಜೀವಿನಿ ಯೋಜನೆಯಡಿ ಮೀನು ಮರಿ ಬಿಡುವ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕೆರೆಗಳನ್ನು ಸಮರ್ಪಕವಾಗಿ ಬಳಸಿಕೊಂಡು ಮೀನುಗಾರಿಕೆ ನಡೆಸಿದರೆ ಗ್ರಾಮೀಣ ಮಹಿಳೆಯರಿಗೆ ಉತ್ತಮ ಆದಾಯ ದೊರೆಯಲಿದೆ ಸರ್ಕಾರ ಗ್ರಾಮೀಣ ಜನರ ಆರ್ಥಿಕ ಅಭಿವೃದ್ಧಿಗಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದ್ದು, ಮತ್ಸ್ಯ ಸಂಜೀವಿನಿ ಯೋಜನೆಯು ಅದರಲ್ಲಿ ಪ್ರಮುಖವಾಗಿದೆ. ಸ್ವಸಹಾಯ ಗುಂಪುಗಳು ಈ ಯೋಜನೆಯ ಪ್ರಯೋಜನವನ್ನು ಪಡೆದು ಮೀನುಗಾರಿಕೆಯನ್ನು ಉದ್ಯಮವಾಗಿ ರೂಪಿಸಿಕೊಂಡರೆ ಆರ್ಥಿಕವಾಗಿ ಬಲಿಷ್ಠರಾಗಲು ಸಾಧ್ಯವಾಗುತ್ತದೆ ಎಂದರು.

ನರೇಗಾ ವಿಭಾಗದ ಸಹಾಯಕ ನಿರ್ದೇಶಕ ಬಿ.ಸಿ. ಶಿವಕುಮಾರ್ ಮಾತನಾಡಿ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕೆರೆಗಳ ಅಭಿವೃದ್ಧಿ ಮತ್ತು ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. ಕೆರೆಗಳ ಅಭಿವೃದ್ಧಿಯ ಜೊತೆಗೆ ಮೀನುಗಾರಿಕೆ ಚಟುವಟಿಕೆಯನ್ನು ಉತ್ತೇಜಿಸುವುದರಿಂದ ಗ್ರಾಮೀಣ ಪ್ರದೇಶದಲ್ಲಿ ಉದ್ಯೋಗಾವಕಾಶಗಳು ಹೆಚ್ಚಾಗಲಿವೆ ಎಂದು ಹೇಳಿದರು.

ಮೀನುಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕಿ ಸುಮಾ ಮಾತನಾಡಿ, ಮೀನುಗಾರಿಕೆ ಕೃಷಿಯು ಕಡಿಮೆ ವೆಚ್ಚದಲ್ಲಿ ಉತ್ತಮ ಆದಾಯ ನೀಡುವ ಕ್ಷೇತ್ರವಾಗಿದ್ದು, ಸರಿಯಾದ ನಿರ್ವಹಣೆ ಮತ್ತು ತಾಂತ್ರಿಕ ಮಾರ್ಗದರ್ಶನದ ಮೂಲಕ ಉತ್ತಮ ಉತ್ಪಾದನೆ ಪಡೆಯಬಹುದು ಎಂದು ಹೇಳಿದರು. ಇಲಾಖೆಯ ವತಿಯಿಂದ ಸ್ವಸಹಾಯ ಗುಂಪುಗಳಿಗೆ ಅಗತ್ಯವಾದ ತರಬೇತಿ ಹಾಗೂ ಮಾರ್ಗದರ್ಶನ ನೀಡಲಾಗುತ್ತದೆ ಎಂದು ತಿಳಿಸಿದರು.

ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ (ಎನ್‌ಆರ್‌ಎಲ್‌ಎಂ) ವಿಭಾಗದ ತಾಲೂಕು ಕಾರ್ಯಕ್ರಮ ವ್ಯವಸ್ಥಾಪಕ ನವೀನ್ ಮಾತನಾಡಿ, ಮಹಿಳಾ ಸ್ವಸಹಾಯ ಗುಂಪುಗಳ ಆರ್ಥಿಕ ಅಭಿವೃದ್ಧಿಗಾಗಿ ವಿವಿಧ ಆದಾಯೋತ್ಪಾದಕ ಚಟುವಟಿಕೆಗಳನ್ನು ಪ್ರೋತ್ಸಾಹಿಸಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ನಿಸರ್ಗ ತಾಲೂಕು ವ್ಯವಸ್ಥಾಪಕರು, ಒಕ್ಕೂಟದ ಎಲ್ಲಾ ಸಿಬ್ಬಂದಿ, ಗ್ರಾಮ ಪಂಚಾಯಿತಿ ಸಿಬ್ಬಂದಿ, ಸ್ವಸಹಾಯ ಗುಂಪಿನ ಸದಸ್ಯರು ಹಾಗೂ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

## ಗೃಹೋಪಯೋಗಿ ಸಿಲಿಂಡರ್ ವಶಕ್ಕೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ತಾಲೂಕಿನ ರಾಮನಾಥಪುರ ಹೊಂಗನಸು ಫ್ಯಾಮಿಲಿ ರೆಸ್ಟೋರೆಂಟ್ ನಲ್ಲಿ ಮಂಗಳವಾರ ಗೃಹೋಪಯೋಗಿ ಅಡುಗೆ ಅನಿಲದ ಸಿಲಿಂಡಗ್‌ಳನ್ನು ವಾಣಿಜ್ಯ ಉದ್ದೇಶಕ್ಕಾಗಿ ಬಳಸುತ್ತಿರುವುದು ಕಂಡು ಬಂದ ಹಿನ್ನಲೆಯಲ್ಲಿ ಆಹಾರ ಇಲಾಖೆ ಶಿರಸ್ತೇದಾರ್ ಎಲ್.ಬಿ. ಮಂಜು, ರೂಪ ದಾಳಿ ನಡೆಸಿ ವಶಕ್ಕೆ ಪಡೆದರು.

ನಂತರ ಮಾತನಾಡಿದ ಎಲ್.ಬಿ. ಮಂಜು, ರಾಮನಾಥಪುರ ಹೊಂಗನಸು ಫ್ಯಾಮಿಲಿ ರೆಸ್ಟೋರೆಂಟ್ ನಲ್ಲಿ 3 ಗೃಹೋಪಯೋಗಿ ಅಡುಗೆ ಅನಿಲದ ಸಿಲಿಂಡಗ್‌ಳನ್ನು ವಾಣಿಜ್ಯ ಉದ್ದೇಶಕ್ಕಾಗಿ ಬಳಸುತ್ತಿರುವುದು ಕಂಡು ಬಂದ ಹಿನ್ನಲೆಯಲ್ಲಿ ಕೊಣನೂರು ಪೋಲೀಸ್ ಠಾಣೆಯಲ್ಲಿ ದೂರು ದಾಖಲಿಸಲಾಗಿದೆ ಎಂದರು.

ವಿವಿಧ ಹೋಟೆಲ್, ಬೇಕರಿ ಮತ್ತು ಟೀ ಸ್ಟಾಲ್‌ಗಳಲ್ಲಿ ಪರೀಶೀಲನೆ ಮಾಡಲಾಗಿದೆ. ಯಾವುದೇ ಕಾರಣಕ್ಕೂ ಗೃಹೋಪಯೋಗಿ ಅಡುಗೆ ಅನಿಲದ ಸಿಲಿಂಡರ್‌ಗಳನ್ನು ವಾಣಿಜ್ಯ ಉದ್ದೇಶಕ್ಕಾಗಿ ಉಪಯೋಗಿಸದೆ. ವಾಣಿಜ್ಯ ಸಿಲಿಂಡರ್ ಗಳನ್ನು ಉಪಯೋಗಿಸಬೇಕಾಗಿ ಮಾಲೀಕರಿಗೆ ತಿಳಿಸಲಾಗಿದೆ. ತಪ್ಪಿದಲ್ಲಿ ಅಂತಹವರ ವಿರುದ್ಧ ದೂರು ದಾಖಲು ಮಾಡಲಾಗುವುದು ಎಂದು ಹೇಳಿದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248